ಕರ್ನಾಟಕ ಸರ್ಕಾರ
**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**
**ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 :** **ಜೂನ್ 9, 2020**

# ಪತ್ರಿಕಾ ಪ್ರಕಟಣೆ

## ನಿಜವಾದ ಅಭಿವೃದ್ಧಿ ಸಾಧಿಸುವ ಮೂಲಕ ಕಲ್ಯಾಣದ ಪರಿಕಲ್ಪನೆ -

## ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ

ಬೆಂಗಳೂರು ಜೂನ್ ೯, (ಕರ್ನಾಟಕ ವಾರ್ತೆ) :

ಕೇವಲ ಹೆಸರಿನಿಂದ ಕಲ್ಯಾಣ ಕರ್ನಾಟಕ ಎಂದು ಕರೆದರೆ ಸಾಲದು, ಈ ಪ್ರದೇಶದ 6 ಜಿಲ್ಲೆಗಳ ನಿಜವಾದ ಅಭಿವೃದ್ಧಿ ಸಾಧಿಸುವ ಮೂಲಕ ಕಲ್ಯಾಣದ ಪರಿಕಲ್ಪನೆ ನಿಜವಾದ ಅರ್ಥದಲ್ಲಿ ಸಾಕಾರಗೊಳ್ಳಬೇಕು ಎನ್ನುವುದು ನಮ್ಮ ಸರ್ಕಾರದ ಆಶಯವಾಗಿದೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ತಿಳಿಸಿದರು.

ಇಂದು ಗೃಹ ಕಚೇರಿ ಕೃಷ್ಣಾದಲ್ಲಿ, ಕಲ್ಯಾಣ ಕರ್ನಾಟಕ ಮಾನವ ಸಂಪನ್ಮೂಲ ಕೃಷಿ ಮತ್ತು ಸಾಂಸ್ಕøತಿಕ ಸಂಘ (ರಿ) ಕಲಬುರ್ಗಿ ವಿಭಾಗ ಕಲಬುರ್ಗಿ ಇದರ (ವಿಡಿಯೋ ಮುಖಾಂತರ) ಉದ್ಘಾಟನೆ ಮಾಡುವ ಮೂಲಕ ಮಾತನಾಡಿದ ಅವರು ಫೆಬ್ರವರಿ 10, 2020 ರಂದು ಹೈದ್ರಾಬಾದ್ ಕರ್ನಾಟಕ ಭಾಗವನ್ನು ಕಲ್ಯಾಣ ಕರ್ನಾಟಕ ಎಂದು ನಮ್ಮ ಸರ್ಕಾರ ಘೋಷಿಸಿತು. ಈ ಭಾಗದ ಜನರಲ್ಲಿ ಕೌಶಲ್ಯ ಸುಧಾರಿಸಿ ಉತ್ಪಾದನೆ ಮತ್ತು ಸೇವಾ ವಲಯಗಳಲ್ಲಿ ಪರಿಣಾಮಕಾರಿ ಬೆಳವಣಿಗೆ ಸಾಧಿಸುವುದು ನಮ್ಮ ಗುರಿ ಎಂದು ತಿಳಿಸಿದರು.

"ಕಲ್ಯಾಣ ಕರ್ನಾಟಕ" ಪ್ರಾಂತ್ಯದ ಅಭಿವೃದ್ಧಿಗೆ ಹೊಸ ಆಯಾಮ ನೀಡುವುದು ನಮ್ಮ ಸರ್ಕಾರದ ಗುರಿ. ಈ ಗುರಿಯನ್ನು ಸಾಧಿಸುವ ನಿಟ್ಟಿನಲ್ಲಿ ಸಂಘವು ಪೂರಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಿದೆ. ಕೃಷಿ, ಆರೋಗ್ಯ, ಶಿಕ್ಷಣ, ಸ್ವಯಂ ಉದ್ಯೋಗ, ಗ್ರಾಮ ಸಬಲೀಕರಣ, ಯುವ ಜನ ಹಾಗೂ ಮಹಿಳಾ ಸಬಲೀಕರಣ ಮತ್ತು ನೈತಿಕ ತತ್ವಗಳನ್ನು ಸಾಧಿಸಿ, ಕಲ್ಯಾಣ ಕರ್ನಾಟಕದ ಜನರ ಬದುಕಿನಲ್ಲಿ ಹೊಸ ಶಕೆಯೊಂದು ಪ್ರಾರಂಭವಾಗಲಿದೆ. ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ 500 ಕೋಟಿ ರೂ. ಗಳನ್ನು ಆಯವ್ಯಯದಲ್ಲಿ ತೆಗೆದಿರಿಸಿದೆ. ಕಲ್ಯಾಣ ಕರ್ನಾಟಕ ಭಾಗದ ಧುರೀಣರು, ಮಾಜಿ ಸಂಸದರು ಡಾ. ಬಸವರಾಜ ಪಾಟೀಲ ಸೇಡಂರವರು ಕ್ರಾಂತಿಕಾರಕ ಬದಲಾವಣೆಗೆ ಮುನ್ನಡಿ ಬರೆಯಲು

ಸಮರ್ಥರಿದ್ದಾರೆ. ಯಾವುದೇ ಅಭಿವೃದ್ಧಿ ಜನಕೇಂದ್ರಿತವಾಗಿರಬೇಕು ಮತ್ತು ಸ್ಥಳೀಯ ಸಂಪನ್ಮೂಲಗಳನ್ನು ಮತ್ತು ಸ್ಥಳೀಯ ಕೌಶ್ಯಲವನ್ನು ಆಧರಿಸಿ ಉತ್ಪಾದನೆ ಮತ್ತು ಸೇವೆಯನ್ನು ಒದಗಿಸಿಕೊಳ್ಳಬೇಕು ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಸ್ವಾಲಂಬನೆಯ ಹಾದಿಯಲ್ಲಿ ನೆಚ್ಚಿನ ಪ್ರಧಾನಿ ಮೋದಿಯವರು ಘೋಷಿಸಿರುವ "ಆತ್ಮ ನಿರ್ಭರ್ ಭಾರತ್" ಅಭಿಯಾನ ಅತ್ಯಂತ ಸೂಕ್ತವಾದುದಾಗಿದೆ. ಸ್ಥಳೀಯ ಅಸ್ಮಿತೆ ಕಾಪಾಡಿಕೊಂಡು ಜಾಗತಿಕ ಅವಕಾಶಗಳನ್ನು ಸದುಪಯೋಗ ಪಡಿಸಿಕೊಳ್ಳುವ ಸುಸಂದರ್ಭವನ್ನು ಕೊರೋನೋತ್ತರ ಬೆಳವಣಿಗೆಗಳು ಒದಗಿಸಿ ಕೊಟ್ಟಿವೆ. ಕಲ್ಯಾಣ ಕರ್ನಾಟಕ ಮಾನವ ಸಂಪನ್ಮೂಲ, ಕೃಷಿ ಮತ್ತು ಸಾಂಸ್ಕøತಿಕ ಸಂಘ ಈ ದಿಸೆಯಲ್ಲಿ ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳಿದೆ ಎನ್ನುವುದು ನನ್ನ ನಂಬಿಕೆಯಾಗಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಸಂಘದ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಕ್ಕೆ ತರುವ ದೃಷ್ಟಿಯಿಂದ 3 ಸಾವಿರ ಸಂಪರ್ಕ ಕೇಂದ್ರಗಳನ್ನು ಸ್ಥಾಪಿಸಲು ಉದ್ದೇಶಿಸಿರುವುದು ಶ್ಲಾಘನೀಯ. ಸಂಸ್ಥೆಯ ವತಿಯಿಂದ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಸಾವಯವ ಕೃಷಿ ಕೇಂದ್ರಗಳ ಸ್ಥಾಪನೆ, ವ್ಯಕ್ತಿತ್ವ ವಿಕಸನಕ್ಕಾಗಿ ವಿಚಾರ ಸಂಕಿರಣ, ಸ್ವಯಂ ಉದ್ಯೋಗ ಹಾಗೂ ಕೌಶಲ್ಯ ತರಬೇತಿ, ಆರೋಗ್ಯ ಶಿಬಿರಗಳನ್ನು ಆಯೋಜಿಸಲು ಉದ್ದೇಶಿಸಿರುವುದು ಸಕಾಲಿಕ.

ಯುವ ಜನ ಹಾಗೂ ಮಹಿಳಾ ಸಬಲೀಕರಣಕ್ಕೆ ಆದ್ಯತೆ ನೀಡಲಾಗಿದೆಯಲ್ಲದೆ, ಗ್ರಾಮಗಳ ಸಬಲೀಕರಣಕ್ಕಾಗಿ ಆರ್ಥಿಕ ಉತ್ತೇಜನ ನೀಡುವುದರ ಜೊತೆಗೆ ಸಾಮಾಜಿಕ ಹಾಗೂ ಸಾಂಸ್ಕøತಿಕ ಕಾರ್ಯಕ್ರಮಗಳನ್ನು ಆಯೋಜಿಸುತ್ತಿರುವುದು ಕಲ್ಯಾಣ ಕರ್ನಾಟಕದ ಸಮಗ್ರ ಅಭಿವೃದ್ಧಿಗೆ ಸಹಕಾರಿಯಾಗಲಿದೆ ಎಂದು ಭಾವಿಸಲಾಗಿದೆ.

ಡಾ. ಬಸವರಾಜ ಪಾಟೀಲ ಸೇಡಂರವರ ಅಧ್ಯಕ್ಷತೆಯಲ್ಲಿ 15 ಜನರ ಆಡಳಿತ ಮಂಡಳಿ ಸದಸ್ಯರ ಸಮಿತಿ ಕಲ್ಯಾಣ ಕರ್ನಾಟಕ ವಿಭಾಗದ ಎಲ್ಲ ಜಿಲ್ಲೆಗಳ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಲಿದೆ. "ಸರ್ವರಿಗೂ ಸಮಬಾಳು ಸರ್ವರಿಗೂ ಸಮಪಾಲು" ಎಂಬ ಧ್ಯೇಯವನ್ನು ಎತ್ತಿ ಹಿಡಿದು ರಾಜ್ಯದ ಸರ್ವಾಂಗೀಣ ಅಭಿವೃದ್ಧಿಗೆ ಸಂಸ್ಥೆ ಕಾರಣೀಭೂತವಾಗಬೇಕೆನ್ನುವುದು ನಮ್ಮೆಲ್ಲರ ಆಶಯ. ಜನ ಕಲ್ಯಾಣಕ್ಕೆ ಈ ಸಂಘ ಕಂಕಣ ತೊಟ್ಟು ಕಲ್ಯಾಣ ಕರ್ನಾಟಕದ ಭಾಗದ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಕೆಲಸವನ್ನೂ ಮಾಡುವಂತಾಗಲಿಯೆಂದು ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ವಿಜಯಪುರ ಜ್ಞಾನ ಯೋಗಾಶ್ರಮದ ಸಿದ್ದೇಶ್ವರ ಸ್ವಾಮೀಜಿ, ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಜೆ.ಪುಟ್ಟಸ್ವಾಮಿ, ಸಂಸದ ಉಮೇಶ್ ಜಾದವ್, ಸಂಘದ ಅಧ್ಯಕ್ಷ ಬಸವರಾಜ್ ಪಾಟೀಲ್ ಸೇಡಂ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಶಂಕರ್‌ಗೌಡ ಪಾಟೀಲ್, ಉಪಸ್ಥಿತರಿದ್ದರು.

## ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆ

**ಬೆಂಗಳೂರು, ಜೂನ್ 9 (ಕರ್ನಾಟಕ ವಾರ್ತೆ) :**

ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆ (KARTET-2019) ದಿನಾಂಕ: 12–07–2020 ರ ಭಾನುವಾರದಂದು ರಾಜ್ಯದಾದ್ಯಂತ ಪತ್ರಿಕೆ 1: ಬೆಳಗಿನ ಅವಧಿ ಹಾಗೂ ಪತ್ರಿಕೆ 2: ಮಧ್ಯಾಹ್ನದ ಅವಧಿ ನಡೆಯಲಿದೆ .ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ವೆಬ್‌ಸೈಟ್: www.schooleducation.kar.nic.in ಅಲ್ಲಿ ವೀಕ್ಷಿಸಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

### ರಾಜ್ಯಸಭಾ ದ್ವೈ–ವಾರ್ಷಿಕ ಚುನಾವಣೆಗೆ ನಾಮಪತ್ರ ಸಲ್ಲಿಕೆ

**ಬೆಂಗಳೂರು, ಜೂನ್ 9 (ಕರ್ನಾಟಕ ವಾರ್ತೆ) :**

**ಜೂನ್ 19 ರಂದು ನಡೆಯಲಿರುವ ರಾಜ್ಯಸಭಾ ದ್ವೈ–ವಾರ್ಷಿಕ ಚುನಾವಣೆಗೆ ಭಾರತೀಯ ಜನತಾ ಪಕ್ಷದ ಅಭ್ಯರ್ಥಿಯಾಗಿ ಶ್ರೀ ಈರಣ್ಣ ಕಡಾಡಿ ಅವರು ಕರ್ನಾಟಕ ವಿಧಾನ ಸಭಾ ಕಾರ್ಯದರ್ಶಿ ಶ್ರೀಮತಿ ಎಂ ಕೆ ವಿಶಾಲಾಕ್ಷಿ ಅವರಿಗೆ ಇಂದು ನಾಮಪತ್ರ ಸಲ್ಲಿಸಿದರು. ಮುಖ್ಯಮಂತ್ರಿ ಶ್ರೀ ಬಿ ಎಸ್ ಯಡಿಯೂರಪ್ಪ, ಭಾರತೀಯ ಜನತಾ ಪಕ್ಷದ ರಾಜ್ಯಾಧ್ಯಕ್ಷ ಶ್ರೀ ನಳಿನ್ ಕುಮಾರ್ ಕಟೀಲ್, ಬೆಳಗಾವಿ ಜಿಲ್ಲಾ ಉಸ್ತುವಾರಿ ಹಾಗೂ ಜಲಸಂಪನ್ಮೂಲ ಸಚಿವ ಶ್ರೀ ರಮೇಶ್ ಎಲ್ ಜಾರಕಿಹೊಳಿ ಈ ಸಂದರ್ಭದಲ್ಲಿ ಹಾಜರಿದ್ದರು.**

**ಛಾಯಾಚಿತ್ರ ಲಗತ್ತಿಸಿದೆ)**

**ಜೂನ್ 19 ರಂದು ನಡೆಯಲಿರುವ ರಾಜ್ಯಸಭಾ ದ್ವೈ–ವಾರ್ಷಿಕ ಚುನಾವಣೆಗೆ ಭಾರತೀಯ ಜನತಾ ಪಕ್ಷದ ಅಭ್ಯರ್ಥಿಯಾಗಿ ಶ್ರೀ ಅಶೋಕ ಗಸ್ತಿ ಅವರು ಕರ್ನಾಟಕ ವಿಧಾನ ಸಭಾ ಕಾರ್ಯದರ್ಶಿ ಶ್ರೀಮತಿ ಎಂ ಕೆ ವಿಶಾಲಾಕ್ಷಿ ಅವರಿಗೆ ಇಲ್ಲಿ ಇಂದು ನಾಮಪತ್ರ ಸಲ್ಲಿಸಿದರು. ಮುಖ್ಯಮಂತ್ರಿ ಶ್ರೀ ಬಿ ಎಸ್ ಯಡಿಯೂರಪ್ಪ, ಭಾರತೀಯ ಜನತಾ ಪಕ್ಷದ ರಾಜ್ಯಾಧ್ಯಕ್ಷ ಶ್ರೀ ನಳಿನ್ ಕುಮಾರ್ ಕಟೀಲ್, ಉಪ ಮುಖ್ಯಮಂತ್ರಿ ಶ್ರೀ ಲಕ್ಷ್ಮಣ ಸವದಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಪ್ರವಾಸೋದ್ಯಮ ಸಚಿವ ಶ್ರೀ ಸಿ ಟಿ ರವಿ ಅವರು ಈ ಸಂದರ್ಭದಲ್ಲಿ ಹಾಜರಿದ್ದರು.**

**ಛಾಯಾಚಿತ್ರ ಲಗತ್ತಿಸಿದೆ)**

ಜೂನ್ 19 ರಂದು ನಡೆಯಲಿರುವ ರಾಜ್ಯ ಸಭೆಯ ಚುನಾವಣೆಯಲ್ಲಿ. ಸ್ಪರ್ಧಿಸಲು ಜಾತ್ಯತೀತ ಜನತಾದಳದ ಅಭ್ಯರ್ಥಿಯಾಗಿ ಮಾಜಿ ಪ್ರಧಾನ ಮಂತ್ರಿಗಳಾದ ಶ್ರಿ ಹೆಚ್. ಡಿ. ದೇವೇಗೌಡ ಅವರು ಇಂದು ವಿಧಾನಸಭೆಯ ಕಾರ್ಯದರ್ಶಿ ಹಾಗೂ ಚುನಾವಣಾಧಿಕಾರಿ.ಗಳಾದ ಶ್ರೀಮತಿ . ವಿಶಾಲಾಕ್ಷಿ ಅವರಿಗೆ ನಾಮಪತ್ರ ಸಲ್ಲಿಸಿದರು ಮಾಜಿ ಮುಖ್ಯ ಮಂತ್ರಿ ಶ್ರೀ ಹೆಚ್ . ಡಿ. ಕುಮಾರಸ್ವಾಮಿ , ಶಾಸಕರುಗಳಾದ ಶ್ರಿ H.D. ರೇವಣ್ಣ ,ಹಾಗೂ ಶ್ರೀ.ಬಂದಪ್ಪ ಕಾಶಂಪೂರ್ ಅವರು ಉಪಸ್ಥಿತರಿದ್ದರು

**ಛಾಯಾಚಿತ್ರ ಲಗತ್ತಿಸಿದೆ)**

ಜೂನ್ 19 ರಂದು.ನಡೆಯಲಿರುವ ರಾಜ್ಯ ಸಭೆಯ ಚುನಾವಣೆಯಲ್ಲಿ. ಸ್ಪರ್ಧಿಸಲು ಪಕ್ಷೇತರ ಅಭ್ಯರ್ಥಿಯಾಗಿ ಸಂಗಮೇಶ ಚಿಕ್ಕನರಗುಂದ ಅವರು ಇಂದು ರಾಜ್ಯ.ಸಭಾ ಚುನಾವಣೆಗೆ ಅಭ್ಯರ್ಥಿ ಯಾಗಿ ಚುನವಣಾಧಿಕಾರಿಗಳಿಗೆ ನಾಮಪತ್ರ ಸಲ್ಲಿಸಿದರು

**ಛಾಯಾಚಿತ್ರ ಲಗತ್ತಿಸಿದೆ)**

## ಆನ್‌ಲೈನ್ (ವಿಡಿಯೋ ಕಾನ್ಫೆರೆನ್ಸ್) ಮೂಲಕ ಮಧ್ಯಸ್ಥಿಕೆ ಪ್ರಕ್ರಿಯೆ

**ಬೆಂಗಳೂರು, ಜೂನ್ 9 (ಕರ್ನಾಟಕ ವಾರ್ತೆ) :**

**ವಿಶ್ವ ಆರೋಗ್ಯ ಸಂಸ್ಥೆ ‘ಕೋವಿಡ್ –೧೯’ನ್ನು ‘ಸಾಂಕ್ರಾಮಿಕ ರೋಗ (ಪಿಡುಗು)’ ಎಂದು ಘೋಷಿಸಿರುವ ಹಿನ್ನೆಲೆಯಲ್ಲಿ ಕಛೇರಿ ಸಿಬ್ಬಂದಿ ವರ್ಗ/ ಮಧ್ಯಸ್ಥಿಕೆದಾರರ / ಸಾರ್ವಜನಿಕರ / ವಕೀಲರ / ಪಕ್ಷಗಾರರ (ಕಕ್ಷಿದಾರರ) ಸುರಕ್ಷತೆಯ ಹಿತದೃಷ್ಟಿಯಿಂದ ಬೆಂಗಳೂರು ಮಧ್ಯಸ್ಥಿಕೆ ಕೇಂದ್ರವು ಆನ್‌ಲೈನ್‌ನಲ್ಲಿ ಮಧ್ಯಸ್ಥಿಕೆ ಪ್ರಕ್ರಿಯೆಯನ್ನು ಪ್ರಾರಂಭಿಸುವುದು ಸೂಕ್ತವೆಂದು ಪರಿಗಣಿಸಿ, ದಿನಾಂಕ 01-06-2020 ರಿಂದ ಆನ್‌ಲೈನ್ (ವಿಡಿಯೋ ಕಾನ್ಫೆರೆನ್ಸ್) ಮೂಲಕ ಮಧ್ಯಸ್ಥಿಕೆ ಪ್ರಕ್ರಿಯೆಯನ್ನು ಪ್ರಾರಂಭಿಸಿದೆ. ಈ ನಿಟ್ಟಿನಲ್ಲಿ ಆನ್‌ಲೈನ್ ಮಧ್ಯಸ್ಥಿಕೆ ಪ್ರಕ್ರಿಯೆಗೆ ಒಪ್ಪಿಗೆಯಿರುವ ವಕೀಲರು / ಪಕ್ಷಗಾರರು ಕೆಳಕಂಡ ಮಧ್ಯಸ್ಥಿಕೆ ಕೇಂದ್ರದ ಇಮೇಲ್‌ಗೆ ತಮ್ಮ ಕೇಸ್ ನಂಬರ್ (ದಾವೆ ಸಂಖ್ಯೆ), ಪಕ್ಷಗಾರರ ಮತ್ತು ವಕೀಲರ ಇಮೇಲ್ ಐಡಿ ಹಾಗೂ ತಮ್ಮ ಮೊಬೈಲ್ ನಂಬರ್‌ಗಳನ್ನು ಕಳುಹಿಸಿದಲ್ಲಿ, ಮಧ್ಯಸ್ಥಿಕೆ ಕೇಂದ್ರವು ಆ ಕೇಸಿನ ಆನ್‌ಲೈನ್ ಮಧ್ಯಸ್ಥಿಕೆ ಪ್ರಕ್ರಿಯೆಯ ದಿನ ಮತ್ತು ಸಮಯವನ್ನು ನಿಗದಿಪಡಿಸಿ ತಮಗೆ ಇಮೇಲ್ / ದೂರವಾಣಿ ಮೂಲಕ ತಿಳಿಸಲಾಗುವುದು. ಇಮೇಲ್ ಐಡಿ – bmconlinemediation@gmail.com** ಎಂದು ಪ್ರಕಟಣೆ ತಿಳಿಸಿದೆ.

**Online Mediation through Video Conference**

Bengaluru, June 9 (Karnataka Information)

In view of declaration of Covid-19 as "Pandemic" by World Health Organisation (WHO) and also in the view of safety of BMC Staff & Mediators, Advocates/ Parties and Public, Bangalore Mediation Centre has started Online Mediation (Video Conference) from 01.06.2020. The concerned advocates/parties who are willing to participate in Online Mediation, can send email-id to the following email-id of Bangalore Mediation Centre by furnishing their case number, Email-ID of the parties and advocates along with mobile number, in further this office will communicate the date and time of the online mediation through Email/Phone to their concerned. e-mail ID: **bmconlinemediation@gmail.com** says Official Press Release

**ಸಚಿವರ ಪ್ರವಾಸ**

ಬೆಂಗಳೂರು, ಜೂನ್ 09 (ಕರ್ನಾಟಕ ವಾರ್ತೆ)

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೆ.ಗೋಪಾಲಯ್ಯ ಅವರು, ಜೂನ್ 10, 11 ಮತ್ತು 12 ರಂದು ಬೀದರ್, ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ಜೂನ್ 12 ರಂದು ಕೇಂದ್ರ ಸ್ಥಾನಕ್ಕೆ ಹಿಂದಿರುಗುವರು.

## "ಅನಧಿಕೃತ ಶಾಲೆ ಮಾನ್ಯತೆ ರದ್ದು – ಶಿಕ್ಷಣ ಸಚಿವರಿಗೆ ಟಿ.ಎಸ್ ನಾಗಾಭರಣ ಶಿಫಾರಸ್ಸು"

**ಬೆಂಗಳೂರು, ಜೂನ್ 9 (ಕರ್ನಾಟಕ ವಾರ್ತೆ) : ಸರ್ಕಾರದ ಸ್ಥಳಾಂತರದ ಅನುಮತಿಯಿಲ್ಲದೆ ಅನಧಿಕೃತವಾಗಿ ನಡೆಸುತ್ತಿರುವ ಬೆಂಗಳೂರಿನ ಚೋಳೂರು ಪಾಳ್ಯದಲ್ಲಿರುವ ಶ್ರೀ ಶ್ವೇತಾ ಪಬ್ಲಿಕ್**

ಶಾಲೆ(ಸೇಂಟ್ ಮಿರಾಸ್ ಪಬ್ಲಿಕ್ ಸ್ಕೂಲ್)ಯ ಮಾನ್ಯತೆಯನ್ನು ರದ್ದು ಮಾಡಿ ಕಾನೂನು ರೀತಿ ಶಿಸ್ತುಕ್ರಮ ಕೈಗೊಳ್ಳಬೇಕೆಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಟಿ.ಎಸ್. ನಾಗಾಭರಣ ಅವರು ಮಾನ್ಯ ಶಿಕ್ಷಣ ಸಚಿವರಿಗೆ ಶಿಫಾರಸ್ಸು ಮಾಡಿದ್ದಾರೆ.

ಚೋಳೂರು ಪಾಳ್ಯದಲ್ಲಿನ ಶ್ರೀ ಶ್ವೇತಾ ಪಬ್ಲಿಕ್ ಶಾಲೆಯು ಅನುದಾನರಹಿತ ಆಂಗ್ಲಮಾಧ್ಯಮ ಶಾಲೆಯಾಗಿದ್ದು ಶಿಕ್ಷಣ ಇಲಾಖೆಯ ನಿಯಮಾವಳಿಗೆ ವಿರುದ್ಧವಾಗಿ ಬೇರೊಂದು ಸ್ಥಳದಲ್ಲಿ ಅನುಮತಿಯಿಲ್ಲದೆ ಅನಧಿಕೃತ ಕಟ್ಟಡದಲ್ಲಿ ನಡೆಸುತ್ತಿರುವುದರಿಂದ ಈ ಶಾಲೆಯ ವಿರುದ್ಧ ಕ್ರಮಕೈಗೊಳ್ಳುವಂತೆ ಶಿಕ್ಷಣ ಇಲಾಖೆಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಪತ್ರ ಬರೆದಿತ್ತು. ಅಲ್ಲದೆ ಶಾಲೆಯ ಸ್ಥಳಾಂತರದ ಬಗ್ಗೆ ಪರಿಶೀಲಿಸಿ ವರದಿ ನೀಡಲು ತ್ರಿಸದಸ್ಯ ಸಮಿತಿಯೊಂದನ್ನು ರಚಿಸುವಂತೆಯೂ ತಿಳಿಸಲಾಗಿತ್ತು. ಆದರೆ ಸದರಿ ಸಮಿತಿಯು ಶ್ವೇತಾ ಪಬ್ಲಿಕ್ ಶಾಲೆಯೂ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಆಕ್ಷೇಪಣೆಗೆ ಸಂಬಂಧಿಸುವುದಿಲ್ಲ ಎಂಬುದಾಗಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ ಬರೆಯಲಾಗಿರುವ ಪತ್ರದಲ್ಲಿ ಉಲ್ಲೇಖಿಸಿರುವುದು ಪ್ರಾಧಿಕಾರದ ಅಧ್ಯಕ್ಷರ ಕಣ್ಣನ್ನು ಕೆಂಪಗಾಗುವಂತೆ ಮಾಡಿದೆ. ತ್ರಿಸದಸ್ಯ ಸಮಿತಿಯಲ್ಲಿದ್ದ ಸದಸ್ಯರು ಯಾರು? ಕನ್ನಡ ಅಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯನ್ನು ಪ್ರಶ್ನಿಸುವ ಹಕ್ಕನ್ನು ಆ ಸಮಿತಿಗೆ ಶಿಕ್ಷಣ ಇಲಾಖೆ ನೀಡಿದೆಯೇ? ಎಂದು ಶಿಕ್ಷಣ ಸಚಿವರಾದ ಎಸ್.ಸುರೇಶ್ ಕುಮಾರ್ ಅವರಿಗೆ ಬರೆಯಲಾಗಿರುವ ಪತ್ರದಲ್ಲಿ ಪ್ರಶ್ನಿಸಿದ್ದಾರೆ.

ಕನ್ನಡ ಭಾಷಾ ಕಲಿಕಾ ಅಧಿನಿಯಮ-2015ರ ಅನುಷ್ಠಾನಕ್ಕೆ ಸಂಬಂಧಿಸಿದಂತೆ ದಿನಾಂಕ: 18-12-2020 ರಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ನೇತೃತ್ವದಲ್ಲಿ ನಡೆದ ಸಭೆಯಲ್ಲಿಯೂ ಸದರಿ ಪ್ರಕರಣ ಸಂಬಂಧ ಚರ್ಚಿಸಿದ್ದು, ಈ ಕುರಿತು ಒಂದು ವಾರದೊಳಗೆ ಸಕ್ಷಮ ಪ್ರಾಧಿಕಾರಗಳು ತೆಗೆದುಕೊಂಡ ಕ್ರಮಗಳ ಬಗ್ಗೆ ಪ್ರಾಧಿಕಾರಕ್ಕೆ ವರದಿ ನೀಡುವಂತೆ ಸಂಬಂಧಪಟ್ಟವರಿಗೆ ಸೂಚಿಸಲಾಗಿದ್ದರೂ ಇವರೆವಿಗೂ ವರದಿ ನೀಡದೆ ನಿರ್ಲಕ್ಷವಹಿಸಿರುವುದು ಅವರ ಉದ್ಧಟತನವನ್ನು ಮತ್ತು ಕನ್ನಡ ವಿರೋಧಿ ನಡವಳಿಕೆಯನ್ನು ಪ್ರತಿಬಿಂಬಿಸುತ್ತದೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ. ಅಷ್ಟೇ ಅಲ್ಲದೇ ಖುದ್ದು ಪ್ರಾಧಿಕಾರದ ಅಧ್ಯಕ್ಷರೇ ಸಾರ್ವಜನಿಕ ಶಿಕ್ಷಣ ಇಲಾಖೆಯ

ನಿರ್ದೇಶಕರಿಗೆ 5-6 ಬಾರಿ ದೂರವಾಣಿ ಕರೆ ಮಾಡಿದರೂ ಸೂಕ್ತ ರೀತಿಯಲ್ಲಿ ಉತ್ತರಿಸದಿರುವುದರ ಹಿಂದೆ ಖಾಸಗಿ ಆಂಗ್ಲ ಮಾಧ್ಯಮ ಶಿಕ್ಷಣ ಸಂಸ್ಥೆಗಳ ದೊಡ್ಡ ಲಾಭಿ ಇರುವ ಬಗ್ಗೆ ಅನುಮಾನ ವ್ಯಕ್ತಪಡಿಸುತ್ತಿರುವ ಪ್ರಾಧಿಕಾರದ ಅಧ್ಯಕ್ಷರು, ಪ್ರಸ್ತುತ ಶ್ರೀ ಶ್ವೇತಾ ಪಬ್ಲಿಕ್ ಶಾಲೆಯು ಅನಧಿಕೃತವಾಗಿ ಶಾಲೆ ನಡೆಸುತ್ತಿರುವ ಕಟ್ಟಡದಲ್ಲಿ ಶೌಚಾಲಯ, ಕುಡಿಯುವ ನೀರು, ಕೊಠಡಿಗಳಿಗೆ ಗಾಳಿ-ಬೆಳಕಿನ ಕೊರತೆ ಇತ್ಯಾದಿ ಸಮಸ್ಯೆಗಳಿವೆ. ಒಂದನೆ ಮಹಡಿಯಲ್ಲಿ ಶಾಲೆ ನಡೆಯುತ್ತಿದ್ದು, ನೆಲಮಹಡಿಯಲ್ಲಿ ಪ್ರಿಂಟಿಂಗ್ ಪ್ರೆಸ್, 2-3ನೇ ಮಹಡಿಯಲ್ಲಿ ಗಾರ್ಮೇಂಟ್ಸ್ ಕಾರ್ಖಾನೆ ನಡೆಯುತ್ತಿದ್ದು, ವಿದ್ಯಾರ್ಥಿಗಳಿಗೆ ಸಾಕಷ್ಟು  ತೊಂದರೆಯಾಗಲಿದೆ. ಅಲ್ಲದೆ ಈ ಶಾಲೆಯನ್ನು ಸ್ಥಳಾಂತರಿಸಲು ಉದ್ದೇಶಿಸಿರುವ ಕಟ್ಟಡ ಆಡಳಿತ ಮಂಡಳಿ ಸಂಸ್ಥೆಯ ಹೆಸರಿನಲ್ಲಿ ಇಲ್ಲದಿರುವ ಕಾರಣ ಶಾಲೆ ಸ್ಥಳಾಂತರಕ್ಕೆ ಅವಕಾಶವಿಲ್ಲ.

ಅಲ್ಲದೆ, ಕಳೆದ 2 ವರ್ಷಗಳಿಂದ ಅನಧಿಕೃತವಾಗಿ ಶಾಲೆ ನಡೆಸುತ್ತಿರುವ ಶ್ರೀ ಶ್ವೇತಾ ಪಬ್ಲಿಕ್ ಶಾಲೆಯ ಮಾನ್ಯತೆಯನ್ನು ರದ್ದುಪಡಿಸಿ ಕ್ರಮ ಜರುಗಿಸುವಂತೆ ದಾಖಲೆಗಳೊಂದಿಗೆ ಉಲ್ಲೇಖಿಸಿ ಶಿಕ್ಷಣ ಸಚಿವರು, ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹಾಗೂ ಆಯುಕ್ತರಿಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಪತ್ರ ಬರೆಯಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## Chairman, Karnataka State Minorities Commission visited St.Mary's Bascillica,church

Bengaluru, June 9 (Karnataka Information)

Abdul Azeem, Chairman, Karnataka State Minorities Commission along with  Anees Siraj, Secretary, Karnataka State Minorities Commission and  Nisar Ahmed, Private Secretary visited the St.Mary's Bascillica, Shivajinagar, Ganesh bagh Jain Stanak, Infantry Road, Gurudhwara Sri Guru Singh sabha at Halsoor and Shanthi Nilaya at Wilson Garden, Bangalore  reviewed the arrangements that are made in the churches , gurudwaras and Jain temples consequent to orders of the Government allowing people of all faiths to offer prayers.

Fr. Martin Kumar of st. Mary’s Bascillica took round the Chairman and explained the arrangements made for the worshipers. He informed that the mass in the church will commence from 13.06.2020 and that individual worshipers have been permitted to enter the church for prayers. Similarly, office bearers of shanthi nilaya, the Protestant church of Wilson garden explained the arrangements made in the church. All arrangements were made as per the guidelines of the Central and State Government.

Kanthilal Jain, Vinod Jain and other temple team members such as Sunil Sankala, Rathan Singhi and others of Ganesh bagh Jain Stanak, Infantry Road, explained in detail the arrangements they have made in the Jain temple and the services they had rendered to the poor people by distributing food kits to the needy. The Jain guru dr. Samkith Muni, who had come from Rajastan and staying in the Stanak, prayed for the welfare of the country and for protection from Covid-19.

Harjinder Singh, President, Gurudhwara Sri Guru Singh Sabha, Halsoor and other office bearers of the Sabha explained the arrangements they had made for the visiting worshipers. Abdul Azeem, Chairman, Karnataka State Minorities Commission suggested few measures that are to be taken in the Sabha to avoid spread of virus from one worshiper to the other says press

Photos attached)